# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2819
ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 29.03.2022
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲಾ ಬೆಳ್ತಂಗಡಿ ಹಾಗೂ ಸುಳ್ಯ ತಾಲ್ಲೂಕಿನಲ್ಲಿ ನಗರ ಯೋಜನಾ ಪ್ರಾಧಿಕಾರ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಎ ರಡಿಯಲ್ಲಿ ಬೆಳ್ತಂಗಡಿ ಪಟ್ಟಣಕ್ಕೆ ಸ್ಥಳೀಯ ಯೋಜನಾ ಪ್ರದೇಶ ಘೋಷಿಸಿ ಸದರಿ ಕಾಯ್ದೆಯ ಕಲಂ 2(7)(ಬಿ) ರಡಿ ಬೆಳ್ತಂಗಡಿ ಪಟ್ಟಣ ಪಂಚಾಯತಿಯೇ ಯೋಜನಾ ಪ್ರಾಧಿಕಾರವಾಗಿ ಕಾರ್ಯನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 274 ಮೈಅಪ್ರಾ 2013, ದಿನಾಂಕ: 09.07.2013 ರಲ್ಲಿ ಆದೇಶಿಸಲಾಗಿದೆ.<br><br>ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-ಎ ರಡಿಯಲ್ಲಿ ಸುಳ್ಯ ಪಟ್ಟಣಕ್ಕೆ ಸ್ಥಳೀಯ ಯೋಜನಾ ಪ್ರದೇಶ ಘೋಷಿಸಿ ಸದರಿ ಕಾಯ್ದೆಯ ಕಲಂ 2(7)(ಬಿ) ರಡಿ ಸುಳ್ಯ ಪಟ್ಟಣ ಪಂಚಾಯತಿಯೇ ಯೋಜನಾ ಪ್ರಾಧಿಕಾರವಾಗಿ ಕಾರ್ಯನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ: ನಅಇ 344 ಮೈಅಪ್ರಾ 2011, ದಿನಾಂಕ: 03.09.2011 ರಲ್ಲಿ ಆದೇಶಿಸಲಾಗಿದೆ. |
| ಆ) | ನಗರ ಯೋಜನಾ ಪ್ರಾಧಿಕಾರ ರಚಿಸಲು ಇರುವ ಮಾನದಂಡಗಳೇನು?(ವಿಸ್ತೃತವಾದ ಮಾಹಿತಿ ಒದಗಿಸುವುದು) | ನಗರ ಯೋಜನಾ ಪ್ರಾಧಿಕಾರ ಘೋಷಿಸಲು ಮಾನದಂಡಗಳನ್ನು ರಚಿಸಿರುವುದಿಲ್ಲ. ಆದರೆ, ಪಟ್ಟಣಗಳ ಜನಸಂಖ್ಯೆ, ಸ್ಥಳೀಯ ಸಂಸ್ಥೆಯ ಆರ್ಥಿಕ ಸ್ಥಿತಿ, ಜನಸಂಖ್ಯೆಯ ದಶಕದ ಬೆಳವಣಿಗೆ (decadal growth rate), ಯಾವ ಮಟ್ಟದ ಸ್ಥಳೀಯ ಸಂಸ್ಥೆ (ಗ್ರಾಮ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ಇತ್ಯಾದಿ), ತಾಲ್ಲೂಕು ಕೇಂದ್ರದ ಪಟ್ಟಣ ಅಥವಾ ಜಿಲ್ಲಾ ಕೇಂದ್ರ ಪಟ್ಟಣ ಎಂಬ ಅಂಶಗಳನ್ನು ಪರಿಶೀಲಿಸಿಕೊಂಡು ಯೋಜನಾ ಪ್ರಾಧಿಕಾರ ರಚಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ. |

**ಕಡತ ಸಂಖ್ಯೆ: ನಅಇ 127 ಮೈಅಪ್ರಾ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ